## ಅಪರ ಸಿವಿಲ್ ನ್ಯಾಯಾಧೀಶರು ಮತ್ತು ಜೆ ಎಂ ಎಫ್ ಸಿ ನ್ಯಾಯಾಲಯ, ದೊಡ್ಡಬಳ್ಳಾಪುರ

**ಸಿ ಸಿ ನಂ : 571/2016**

**ಪಿ ಡಬ್ಲ್ಯೂ - 4**

**ಸಿ ಡಬ್ಲ್ಯೂ - 8**

**ದಿಃ 12.01.2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.**

**ಹೆಸರು ಃ ರಾಮಚಂದ್ರಯ್ಯ**

**ತಂದೆಯ ಹೆಸರು ಃ ದಾಸಪ್ಪ**

**ವಯಸ್ಸು ಃ 36 ವರ್ಷ**

**ಉದ್ಯೋಗ ಃ ಡ್ರೈವರ್**

**ವಿಳಾಸ ಃ ಮಾಗಡಿ ತಾಲ್ಲೂಕು**

**ಮುಖ್ಯ ವಿಚಾರಣೆ ಃ ಸ ಸ ಅ ರವರಿಂದ**

ಆರೋಪಿತರು ಗೊತ್ತಿಲ್ಲ. ಚಾಸಾ-1 ರವರು ನನಗೆ ಪರಿಚಿತಳಲ್ಲ, ಚಾಸಾ-1 ರವರ ತಂದೆ ಚಾಸಾ-2 ರವರು ಗೊತ್ತು. ನಾನು ಚಾಸಾ-1 ಮತ್ತು 1 ನೇ ಆರೋಪಿಯ ಮದುವೆಗೆ ಹೋಗಿಲ್ಲ. ಮದುವೆಯ ಸಂದರ್ಭದಲ್ಲಿ ಏನು ಕೊಡಲಾಗಿತ್ತು ಎಂದು ಗೊತ್ತಿಲ್ಲ. ಅವರಿಬ್ಬರ ದಾಂಪತ್ಯ ಜೀವನದ ಬಗ್ಗೆಯೂ ನನಗೆ ಯಾವುದೇ ವಿಚಾರ ಗೊತ್ತಿಲ್ಲ. ನಾನು ಪೋಲೀಸರಿಗೆ ಹೇಳಿಕೆಯನ್ನು ಕೊಟ್ಟಿಲ್ಲ.

**(ಈ ಹಂತದಲ್ಲಿ ಸ ಸ ಅ ರವರು ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ಕೇಳಿದ್ದರಿಂದ ಅನುಮತಿ ನೀಡಲಾಯಿತು)**

**ಪಾಟೀ ಸವಾಲುಃ ಸ ಸ ಅ ರವರಿಂದ**

ಚಾಸಾ-1 ಮತ್ತು 1 ನೇ ಆರೋಪಿಯ ಮದುವೆಯ ಸಂದರ್ಭದಲ್ಲಿ ಗಂಡಿಗೆ ರೂ. 10 ಲಕ್ಷ ಹಾಗೂ 100 ಗ್ರಾಂ ಚಿನ್ನದ ಒಡವೆಗಳನ್ನು ಕೊಟ್ಟು ಮದುವೆ ಮಾಡಿಕೊಡುವಂತೆ

ಆರೋಪಿತರು ಕೇಳಿಕೊಂಡಿದ್ದರು ಎಂದರೆ ಗೊತ್ತಿಲ್ಲ. ಅದಕ್ಕೆ ಒಪ್ಪಿದ ಚಾಸಾ-2 ರವರು ಗಂಡಿಗೆ 35 ಗ್ರಾಂ ಚಿನ್ನದ ಒಡವೆ ಹಾಗೂ ರೂ. 1 ಲಕ್ಷ ಕೊಡುವುದಾಗಿ ತೀರ್ಮಾನ ಮಾಡಲಾಗಿ ಅದರಂತೆ ಬಟ್ಟೆ ಬರೆಗಳನ್ನು ಹಾಗೂ ಚಾಸಾ-1 ರವರಿಗೂ ಒಡವೆಗಳನ್ನು ಕೊಟ್ಟು ಅದ್ಧೂರಿಯಾಗಿ ಮದುವೆ ಮಾಡಿದ್ದರು ಎಂದರೆ ಗೊತ್ತಿಲ್ಲ. ಮದುವೆಯಾದ ಎರಡೇ ದಿನಗಳಲ್ಲಿ 1 ನೇ ಆರೋಪಿ ಚಾಸಾ-1 ರವರಿಗೆ ಕೇಳಿದಷ್ಟು ಹಣ ಕೊಟ್ಟಿಲ್ಲವೆಂದು ಗಲಾಟೆ ಮಾಡಿದ ವಿಚಾರ ನನಗೆ ತಿಳಿಯಿತು ಎಂದರೆ ಗೊತ್ತಿಲ್ಲ. ಆರೋಪಿತರು ರೂ. 10 ಲಕ್ಷ ವರದಕ್ಷಿಣೆ ಹಣ ತರಬೇಕೆಂದು ಬೇಡಿಕೆ ಇಟ್ಟಿದ್ದರು ಎಂದರೆ ಗೊತ್ತಿಲ್ಲ. ಹಣವನ್ನು ತರದೇ ಇದ್ದ ಕಾರಣ ಚಾಸಾ-1 ರವರಿಗೆ ಆರೋಪಿತರು ಮಾನಸಿಕ ಹಾಗೂ ದೈಹಿಕ ಹಿಂಸೆ ಕೊಡುತ್ತಿದ್ದರು ಎಂದರೆ ಗೊತ್ತಿಲ್ಲ. ಈ ವಿಚಾರವಾಗಿ ಸಾಕಷ್ಟು ಪಂಚಾಯಿತಿ ಕೂಡ ಆಗಿತ್ತು ಎಂದರೆ ಗೊತ್ತಿಲ್ಲ. ಹಣದ ವಿಚಾರವಾಗಿ ಆರೋಪಿತರು ಚಾಸಾ-1 ರವರಿಗೆ ಹೊಡೆದು ಮಲಗಿಸಿದ್ದ ಹಾಗೂ ಚಾಸಾ-1 ರವರಿಗೆ ಚಿಕಿತ್ಸೆ ಕೊಡಿಸಿದ ಬಗ್ಗೆ ಚಾಸಾ-2 ನನಗೆ ತಿಳಿಸಿದ್ದರು ಎಂದರೆ ಗೊತ್ತಿಲ್ಲ. ನಂತರ ಚಾಸಾ-2 ರೂ. 1 ಲಕ್ಷ ಹಣವನ್ನು 1 ನೇ ಆರೋಪಿಗೆ ಕೊಟ್ಟಿದ್ದರು ಎಂದರೆ ಗೊತ್ತಿಲ್ಲ. ಆದರೂ ಆರೋಪಿತರು ಚಾಸಾ-1 ರವರಿಗೆ ಮತ್ತಷ್ಟು ಹಣ ಕೇಳಿ ಗಲಾಟೆ ಮಾಡಿ ಮನೆಯಿಂದ ಹೊರಗೆ ಹಾಕಿದ್ದರು ಎಂದರೆ ಗೊತ್ತಿಲ್ಲ. ಈ ಕುರಿತು ಚಾಸಾ-1 ಪೋಲೀಸರಿಗೆ ದೂರನ್ನು ನೀಡಿದ್ದು, ದಿಃ 01.07.2017 ರಂದು ನಾನು ಪೋಲೀಸರಿಗೆ ಈ ಕುರಿತು ಈಗ ಓದಿ ಹೇಳಿದಂತೆ ನನ್ನ ಹೇಳಿಕೆಯನ್ನು ನೀಡಿರುತ್ತೇನೆ ಎಂದರೆ ಸರಿಯಲ್ಲ. ಸಾಕ್ಷಿಯು ನಿರಾಕರಿಸಿದ ಹೇಳಿಕೆಯನ್ನು ನಿಪಿ-8 ಎದು ಗುರುತಿಸಲಾಯಿತು. ನಿಪಿ-8 ರಲ್ಲಿನ ವಿಚಾರಗಳು ಗೊತ್ತಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲುಃ</u> ಆರೋಪಿತರ ಪರ ವಕೀಲರು ಇಲ್ಲ ಎಂದು ನುಡಿದಿರುತ್ತಾರೆ.**

**(ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚುಗಾರರಿಂದ ಕಂಪ್ಯೂಟರನಲ್ಲಿ ಮಾಡಿಸಲಾಯಿತು)**

**ಓ ಹೇ ಕೇ ಸ ಅದೆ**

**ಅಪರ ಸಿವಿಲ್ ನ್ಯಾ. ಮತ್ತು**
**ಜೆ.ಎಂ.ಎಫ್.ಸಿ, ದೊಡ್ಡಬಳ್ಳಾಪುರ**